ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬಳ್ಳಾರಿ ಜಿಲ್ಲೆ ಹೊಸಕೋಟೆ ನಗರದಲ್ಲಿರುವ ಶ್ರೀ ಅನ್ನಪೂರ್ಣೇಶ್ವರಿ ಸಂಸ್ಥೆಯಲ್ಲಿ ಕಿರಿಯ ತಾಂತ್ರಿಕ (ಜೆ.ಟಿ.ಎಸ್.) ಶಾಲೆಯನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓ ದ ಲಾ ಗಿ ದೆ:-

01. ಅಧ್ಯಕ್ಷರು, ದೇವರಕೊಳ್ಳ ಶ್ರೀ ಅನ್ನಪೂರ್ಣೇಶ್ವರಿ ಮಠ ಸಂಕ್ಲಾಪುರ, 21ನೇ ವಾರ್ಡ್, ಹೊಸಪೇಟೆ ಇವರ ಪತ್ರ ಸಂಖ್ಯೆ: ಉಚಿತ ಶಿಕ್ಷಣ ಜೆಟಿಎಸ್, ದಿನಾಂಕ:23.04.2018.
02. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಡಿಟಿಇ 05 ಡಿವಿಪಿ (2) 2018, ದಿ:30.04.2018.

ಪ್ರ ಸ್ತಾ ವ ನೆ:-

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಪ್ರಸ್ತಾವನೆಯಲ್ಲಿ ಹೊಸಪೇಟೆ ನಗರದಲ್ಲಿ ಶ್ರೀ ಅನ್ನ ಪೂರ್ಣೇಶ್ವರಿ ವಿದ್ಯಾಪೀಠ ಸಂಸ್ಥೆಯವರು ಬಳ್ಳಾರಿ ನಗರದಲ್ಲಿ ಮಾತ್ರ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ ಒಂದೇ ಇದ್ದು, ಇದಕ್ಕೆ ವಿದ್ಯಾರ್ಥಿಗಳ ಸಂಖ್ಯೆ ಸೀಮಿತವಾಗಿರುವುದರಿಂದ ಅನೇಕ ಆಸಕ್ತಿಯುಳ್ಳ ವಿದ್ಯಾರ್ಥಿಗಳು ಈ ಶಿಕ್ಷಣದಿಂದ ವಂಚಿತರಾಗಿರುತ್ತಾರೆ. ಅಂತಹ ವಿದ್ಯಾರ್ಥಿಗಳಿಗೆ ಕಿರಿಯ ತಾಂತ್ರಿಕ ಶಿಕ್ಷಣದ ವ್ಯವಸ್ಥೆಯನ್ನು ಕಲ್ಪಿಸುವ ಸದುದ್ದೇಶವನ್ನು ಶ್ರೀ ಅನ್ನಪೂರ್ಣೇಶ್ವರಿ ವಿದ್ಯಾಪೀಠ ಸಂಸ್ಥೆಯ ವತಿಯಿಂದ ಕಿರಿಯ ತಾಂತ್ರಿಕ ಪ್ರೌಢಶಾಲೆಯನ್ನು ಪ್ರಾರಂಭಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ತಾಂತ್ರಿಕ ಶಿಕ್ಷಣ ನಿರ್ದೇಶಕರ ಪ್ರಸ್ತಾವನೆಯಲ್ಲಿ ಕಿರಿಯ ತಾಂತ್ರಿಕ ಶಾಲೆಯನ್ನು ಪ್ರಾರಂಭಿಸಲು ಅತ್ಯಗತ್ಯವಾಗಿ ಬೇಕಾಗಿರುವ 2 ಎಕರೆ ಜಮೀನನ್ನು ಈಗಾಗಲೇ ಶ್ರೀ ಅನ್ನಪೂರ್ಣೇಶ್ವರಿ ವಿದ್ಯಾಪೀಠ ಸಂಸ್ಥೆಯಲ್ಲಿ ಲಭ್ಯವಿರುವ ಒಟ್ಟು 14.76 ಎಕರೆ ಜಮೀನಿನಲ್ಲಿ ಒದಗಿಸಿಕೊಳ್ಳಲಾಗಿರುತ್ತದೆ. ಸಂಸ್ಥೆಯ ಪ್ರಾರಂಭಕ್ಕೆ ಇಲಾಖೆಗೆ ಭರಿಸಬೇಕಾದ ರೂ.5000/- ಗಳ ತನಿಖಾ ಮೊತ್ತವನ್ನು ಇಲಾಖೆಗೆ ಪಾವತಿಸಿದೆ. ಸದರಿ ಸಂಸ್ಥೆಗೆ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ತನಿಖಾ ತಂಡವು ಭೇಟಿ ನೀಡಿ ಸ್ಥಳ ತನಿಖೆಯನ್ನು ನಡೆಸಿ, ಶ್ರೀ ಅನ್ನಪೂರ್ಣೇಶ್ವರಿ ಸಂಸ್ಥೆಯಲ್ಲಿ ಕಿರಿಯ ತಾಂತ್ರಿಕ (ಜೆ.ಟಿ.ಎಸ್.) ಶಾಲೆಯನ್ನು 2018-19ನೇ ಸಾಲಿನಿಂದ, ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ ಕೋರ್ಸುಗಳನ್ನು ಕನ್ನಡ ಮತ್ತು ಆಂಗ್ಲ ಮಾಧ್ಯಮದಲ್ಲಿ ತಲಾ 40 ವಿದ್ಯಾರ್ಥಿ ಪ್ರಮಾಣದೊಂದಿಗೆ ಪ್ರಾರಂಭಿಸಲು ಶಿಫಾರಸ್ಸು ಸಹ ಮಾಡಿರುತ್ತಾರೆ. ಆದ್ದರಿಂದ, ಸದರಿ ಕಿರಿಯ ತಾಂತ್ರಿಕ ಶಾಲೆಯನ್ನು ಪ್ರಾರಂಭಿಸಲು ಅನುಮತಿ ನೀಡಬಹುದೆಂದು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪುಟ 2ಕ್ಕೆ

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 110 ಟಿಪಿಇ 2018.**
**ಬೆಂಗಳೂರು, ದಿನಾಂಕ: 28ನೇ ಜುಲೈ 2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2018-19ನೇ ಸಾಲಿನಿಂದ ಬಳ್ಳಾರಿ ಜಿಲ್ಲೆಯ ಶ್ರೀ ಅನ್ನಪೂರ್ಣೇಶ್ವರಿ ವಿದ್ಯಾಪೀಠ ಸಂಸ್ಥೆಯ ವತಿಯಿಂದ ಶ್ರೀ ಅನ್ನಪೂರ್ಣೇಶ್ವರಿ ಕಿರಿಯ ತಾಂತ್ರಿಕ ಶಾಲೆಯನ್ನು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ ಕೋರ್ಸ್‌ಗಳನ್ನು ಕನ್ನಡ ಮತ್ತು ಆಂಗ್ಲ ಮಾಧ್ಯಮದಲ್ಲಿ ತಲಾ 40 ವಿದ್ಯಾರ್ಥಿ ಪ್ರಮಾಣದೊಂದಿಗೆ ಈ ಕೆಳಕಂಡ ಷರತ್ತು ಹಾಗೂ ನಿಬಂಧನೆಗಳಿಗೊಳಪಟ್ಟು ಪ್ರಾರಂಭಿಸಲು ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತು ಮತ್ತು ನಿಬಂಧನೆಗಳು**

1) ಸದರಿ ಕಿರಿಯ ತಾಂತ್ರಿಕ ಶಾಲೆಯನ್ನು ಪ್ರಾರಂಭಿಸಲು ಸರ್ಕಾರದಿಂದ ಯಾವುದೇ ಜಮೀನನ್ನು ಒದಗಿಸುವುದಿಲ್ಲ.
2) ಸದರಿ ಕಿರಿಯ ತಾಂತ್ರಿಕ ಶಾಲೆಯನ್ನು ನಡೆಸಲು ಸರ್ಕಾರದಿಂದ ಯಾವುದೇ ಅನುದಾನವನ್ನು ಒದಗಿಸುವುದಿಲ್ಲ.
3) ಸದರಿ ಕಿರಿಯ ತಾಂತ್ರಿಕ ಶಾಲೆಯನ್ನು ಪ್ರವೇಶಾತಿಗೆ ಸಂಬಂಧಿಸಿದಂತೆ, ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಆದೇಶಗಳನ್ನು ಮತ್ತು ಸೂಚನೆಗಳನ್ನು ಪಾಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ)

**ಗೆ:**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ಅಧ್ಯಕ್ಷರು, ದೇವರಕೊಳ್ಳ ಶ್ರೀ ಅನ್ನಪೂರ್ಣೇಶ್ವರಿ ಮಠ, ಸಂಕ್ಲಾಪುರ, 21ನೇ ವಾರ್ಡ್, ಹೊಸಪೇಟೆ.
3. ಸರ್ಕಾರದ ಉಪ ಕಾರ್ಯದರ್ಶಿ, ತಾಂತ್ರಿಕ ಮತ್ತು ಕಾಲೇಜು ಶಿಕ್ಷಣ ಇಲಾಖೆ
4. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು / ಓಡಿಜಿಸಿ

ಹಿಂಬರಹ ಸಂಖ್ಯೆ: ಡಿಟಿಇ 05 ಡಿವಿಪಿ(2) 2018 ದಿನಾಂಕ: 01/08/2018.

ಸರ್ಕಾರದ ಆದೇಶದ ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಂಬಂಧಪಟ್ಟ ಈ ಕೆಳಕಂಡ ಅಧಿಕಾರಿಗಳಿಗೆ ಹಾಗೂ ವಿಭಾಗಗಳಿಗೆ ಕಳುಹಿಸಲಾಗಿದೆ.

01. ಅಧ್ಯಕ್ಷರು / ಕಾರ್ಯದರ್ಶಿಗಳು, ದೇವರಕೊಳ್ಳ ಶ್ರೀ ಅನ್ನಪೂರ್ಣೇಶ್ವರಿ ಮಠ, ಸಂಕ್ಲಾಪುರ, 21ನೇ ವಾರ್ಡ್, ಹೊಸಪೇಟೆ.
02. ಪ್ರಿನ್ಸಿಪಾಲರು, ದೇವರಕೊಳ್ಳ ಶ್ರೀ ಅನ್ನಪೂರ್ಣೇಶ್ವರಿ ಮಠ, ಸಂಕ್ಲಾಪುರ, 21ನೇ ವಾರ್ಡ್, ಹೊಸಪೇಟೆ.
03. ಜಂಟಿ ನಿರ್ದೇಶಕರು [ಆಡಳಿತ/ಪರೀಕ್ಷೆ/ತನಿಖೆ/ಎಟಿಎಸ್]
04. ಉಪ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ]
05. ಸಹಾಯಕ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ/ಎಂಪಿಸಿ]
06. ಉಪ ನಿರ್ದೇಶಕರು (ಸಾಂಖ್ಯಿಕ ವಿಭಾಗ)
07. ಆಡಳಿತಾಧಿಕಾರಿಗಳಿಗೆ
08. ರಿಜಿಸ್ಟ್ರಾರ್ (ಪರೀಕ್ಷೆ/ಎಸಿಎಂ)
09. ಅಧೀಕ್ಷಕರು, ಎಸಿಎಂ ವಿಭಾಗ
10. ಕಾರ್ಯನಿರ್ವಾಹಕರು, ಎಸಿಎಂ(2) ವಿಭಾಗ
11. **ಸರ್ಕಾರಿ ಆದೇಶಗಳ ಕಡತಕ್ಕೆ**
12. ಈ ಗೌರ್‌ನೆನ್ಸ್ ಸೆಲ್‌ಗೆ
13. ಕಛೇರಿ ಪ್ರತಿ.

ಜಂಟಿ ನಿರ್ದೇಶಕರು (ಎಟಿಎಸ್)